# ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 471 (543)
2. **ಸದಸ್ಯರ ಹೆಸರು** : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)
3. **ಉತ್ತರಿಸಬೇಕಾದ ದಿನಾಂಕ** : 30.01.2026
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| **ಕ್ರಮ ಸಂಖ್ಯೆ** | **ಪ್ರಶ್ನೆ** | **ಉತ್ತರ** |
|---|---|---|
| **(ಅ)** | ರಾಜ್ಯದಲ್ಲಿ ಒಟ್ಟು ಖಾಲಿಯಿರುವ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು; | ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೃಂದದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ- **82.** |
| **(ಆ)** | ಸದರಿ ಖಾಲಿ ಹುದ್ದೆಗಳಿಗೆ ಬೇರೆ ಇಲಾಖೆಗಳಿಂದ ನಿಯೋಜನೆ ಮೇರೆಗೆ ಅಧಿಕಾರಿಗಳು ಬಂದು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| **(ಇ)** | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಹಲವಾರು ಹಿರಿಯ ಸಹಾಯಕ ನಿರ್ದೇಶಕರುಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿಯವರುಗಳಿಗೆ ಹಾಲಿ ಖಾಲಿಯಿರುವ ಕಾರ್ಯನಿರ್ವಾಹಕ ಹುದ್ದೆಗೆ ಬಡ್ತಿ/ಪ್ರಭಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲು ಸಹಾಯಕ ನಿರ್ದೇಶಕರ ಹುದ್ದೆಯು ಪೋಷಕ ವೃಂದವಾಗಿರುತ್ತದೆ.<br><br>ಸಹಾಯಕ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯು ಪೋಷಕ ವೃಂದವಾಗಿರುತ್ತದೆ.<br><br>ಪ್ರಸ್ತುತ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತೆಯ ಬಗ್ಗೆ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ **ಕರಡು ಜೇಷ್ಠತಾ ಪಟ್ಟಿ**ಯನ್ನು **ದಿ:31.12.2011**ರಲ್ಲಿದ್ದಂತೆ ಸರ್ಕಾರದ ಅಧಿಕೃತ |

| | | |
|---|---|---|
| | | ಜ್ಞಾಪನ ಸಂಖ್ಯೆ:**ಗ್ರಾಅಪ 09 ಜಿಪಿಎಸ್ 2025, ದಿ:14.01.2026**ರಲ್ಲಿ ಪ್ರಕಟಿಸಿದ್ದು ಈ ಬಗ್ಗೆ **ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ** ನಂತರ ಇದನ್ನಾಧರಿಸಿ ಸಹಾಯಕ ನಿರ್ದೇಶಕರ ವೃಂದದ ಕರಡು/ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಸ್ವೀಕರಿಸಿ ನಿಯಮಾನುಸಾರ ಪರಿಶೀಲಿಸಿ ಸದರಿ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸಿದ ನಂತರ ಕಾರ್ಯನಿರ್ವಾಹಕ ಅಧಿಕಾರಿ ವೃಂದದ ಮುಂಬಡ್ತಿ ನೀಡುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.<br><br>ಮುಂದುವರೆದು, ರಾಜ್ಯದ ವಿವಿಧ ತಾಲ್ಲೂಕು ಪಂಚಾಯಿತಿಗಳಲ್ಲಿ ಖಾಲಿಯಿರುವ ಕಾರ್ಯ ನಿರ್ವಾಹಕ ಅಧಿಕಾರಿ ಹುದ್ದೆಗೆ ಹೆಚ್ಚುವರಿ ಪ್ರಭಾರ ವ್ಯವಸ್ಥೆ ಮಾಡುವ ಸಂದರ್ಭಗಳಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಏಕರೂಪದ ಮಾನದಂಡಗಳನ್ನು ಅನುಸರಿಸುವುದು ಅತ್ಯಗತ್ಯವೆಂದು ಪರಿಗಣಿಸಿ ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ವಿವಿಧ ಕಾರಣಗಳಿಂದಾಗಿ ಖಾಲಿ ಇರುವ ಅಥವಾ ಮುಂದೆ ಖಾಲಿಯಾಗಲಿರುವ ಹುದ್ದೆಗಳಿಗೆ ಖಾಯಂ ಅಧಿಕಾರಿಯನ್ನು ನಿಯುಕ್ತಿಗೊಳಿಸುವವರೆಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ-68 ರ ಅಧಿಕಾರ ಮಿತಿಯೊಳಗೆ ಹೆಚ್ಚುವರಿ ಪ್ರಭಾರ ವ್ಯವಸ್ಥೆಯನ್ನು ಮಾಡಲು **ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 177 ಪಬವ 2022 (ಇ) ದಿ:02.09.2022**ರಲ್ಲಿ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ. |
| **(ಈ)** | ಇದ್ದಲ್ಲಿ, ಬೇರೆ ಇಲಾಖೆಯ ಅಧಿಕಾರಿಗಳನ್ನು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ | ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ **ಹಿರಿಯ ಸಹಾಯಕ ನಿರ್ದೇಶಕರ** ಪದನಾಮದ ಹುದ್ದೆ ಇರುವುದಿಲ್ಲ. |

| | | |
|---|---|---|
| | ಅಧಿಕಾರಿಗಳಾಗಿ ನಿಯೋಜಿಸುವುದನ್ನು ನಿಲ್ಲಿಸಿ ಹಾಲಿಯಿರುವ ಹಿರಿಯ ಸಹಾಯಕ ನಿರ್ದೇಶಕರಿಗೆ ಯಾವ ಕಾಲಮಿತಿಯೊಳಗೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಹುದ್ದೆಗೆ ಮುಂಬಡ್ತಿ ನೀಡಲಾಗುವುದು? | **ಕರ್ನಾಟಕ ಸಾಮಾನ್ಯ ನೇಮಕಾತಿ ನಿಯಮಗಳು 1977**ರನ್ವಯ ಸಮಾನಾಂತರ ವೇತನ ಶ್ರೇಣಿ ಹೊಂದಿರುವ ಅನ್ಯ ಇಲಾಖೆಯ ಬೆರಳೆಣಿಕೆಯಷ್ಟು ಅನ್ಯ ಇಲಾಖೆಯ ಅಧಿಕಾರಿಗಳು ನಿಯೋಜನೆಯ ಮೇಲೆ ವಿವಿಧ ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ನಿಯೋಜನೆಗೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಲು ಸಹಾಯಕ ನಿರ್ದೇಶಕರ ಹುದ್ದೆಯು ಪೋಷಕ ವೃಂದವಾಗಿರುತ್ತದೆ. ಸಹಾಯಕ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯು ಪೋಷಕ ವೃಂದವಾಗಿರುತ್ತದೆ.<br>ಪ್ರಸ್ತುತ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತೆಯ ಬಗ್ಗೆ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ **ಕರಡು ಜೇಷ್ಠತಾ ಪಟ್ಟಿ**ಯನ್ನು **ದಿ:31.12.2011**ರಲ್ಲಿದ್ದಂತೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:**ಗ್ರಾಅಪ 09 ಜಿಪಿಎಸ್ 2025, ದಿ:14.01.2026**ರಲ್ಲಿ ಪ್ರಕಟಿಸಿದ್ದು ಈ ಬಗ್ಗೆ **ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ** ನಂತರ ಸಹಾಯಕ ನಿರ್ದೇಶಕರ ವೃಂದದ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ನಂತರ ಕಾರ್ಯನಿರ್ವಾಹಕ ಅಧಿಕಾರಿ ವೃಂದಕ್ಕೆ ಮುಂಬಡ್ತಿ ನೀಡುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಗ್ರಾಅಪ 09 ಪಬವ 2026 (ಇ)

**(ಪ್ರಿಯಾಂಕ್.ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು